# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದ ರಾಜು ಇವರು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ.

### ನಿಯಮ-72 ರಡಿಯಲ್ಲಿ ಗಮನ ಸೆಳೆಯುವ ಸೂಚನೆ:-

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ರಾಜ್ಯದ 32 ಕಡೆಗಳಲ್ಲಿ 784 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಶ್ರಮಿಕ ವಸತಿಸಹಿತ ಶಾಲೆಗಳ ಟೆಂಡರ್‌ಗೆ ಸಂಬಂಧಸಿದಂತೆ, ಲಭ್ಯ ಮಾಹಿತಿ ಪ್ರಕಾರ ಟೆಂಡರ್ ಕರೆಯುವ ಮುನ್ನವೇ ಗುತ್ತಿಗೆದಾರರು ಹಾಗೂ ಉಪ ಗುತ್ತಿಗೆದಾರರೂ ನಿಗದಿಯಾಗಿದ್ದಾರೆ. ನಾಲ್ಕು ಪ್ಯಾಕೇಜ್ ಗುತ್ತಿಗೆ ಪೈಕಿ ಮೂರು ಅನ್ಯರಾಜ್ಯದ ಗುತ್ತಿಗೆದಾರರ ಪಾಲಾಗಿದೆ. ಒಂದೊಮ್ಮೆ 7-8 ಜಿಲ್ಲೆಗಳ ಕಾಮಾಗಾರಿಗಳನ್ನು ಒಟ್ಟುಗೂಡಿಸದೇ ಹೋಗಿದ್ದರೆ ರಾಜ್ಯ ಸಣ್ಣ ಮಧ್ಯಮ ಪ್ರಮಾಣದ ಗುತ್ತಿಗೆದಾರರು ಸ್ಪರ್ಧೆ ಮಾಡಿ ಅವಕಾಶ ಪಡೆದುಕೊಳ್ಳಲು ಸಾಧ್ಯವಾಗುತ್ತಿತ್ತು. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಸಾಕಷ್ಟು ಹಣವಿದೆ. ಅದನ್ನು ಖಾಲಿ ಮಾಡಬೇಕೆಂಬ ಪ್ರಯತ್ನವಿದೆ, ಹಾಗೆಯೇ ಶಾಲೆ ಆರಂಭಿಸುವ ಬಗ್ಗೆ ಶಿಕ್ಷಣ ಇಲಾಖೆಯೊಂದಿಗೆ ಸಮಾಲೋಚನೆ ನಡೆಸಿಲ್ಲ ಮತ್ತು ಇರುವ ಸರ್ಕಾರಿ ಶಾಲೆ ಮುಚ್ಚುತ್ತಿರುವಾಗ ಅಂತಹ ಶಾಲೆಯೊಂದನ್ನು ಗುರುತಿಸಿ ಕಾರ್ಮಿಕ ಮಂಡಳಿ ವಸತಿ ಶಾಲೆ ಆರಂಭಿಸಲು ಕ್ರಮಕೈಗೊಳ್ಳಬಹುದಿತ್ತು. ಅದರ ಬದಲು ಹೊಸದಾಗಿ 700-800 ಕೋಟಿ ರೂ.ವೆಚ್ಚ ಮಾಡುತ್ತಿರುವದರಿಂದ ಅಕ್ರಮ ನಡೆಯುತ್ತಿರುವುದಾಗಿ ಕಾಣುತ್ತಿದೆ. ಈ ವಿಷಯದ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನಸೆಳೆಯಲು ಬಯಸುತ್ತೇನೆ.

### ಉತ್ತರ:-

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ವತಿಯಿಂದ ಅವರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡಲು ವಸತಿ ಶಾಲೆಗಳನ್ನು ನಿರ್ಮಾಣ ಮಾಡಲು ಸರ್ಕಾರದ ಆಡಳಿತಾತ್ಮಕ ಅನುಮೋದನೆಯನ್ವಯ ದಿನಾಂಕ:26-09-2025 ರಂದು ಟೆಂಡರ್ ಕರೆಯಲಾಗಿದ್ದು, ಪ್ರಸ್ತುತ ವಿವಿಧ ಬಿಡ್‌ದಾರರ ಬಿಡ್‌ಗಳ ಮೌಲ್ಯಮಾಪನ ಕಾರ್ಯವನ್ನು ನಡೆಸಲಾಗುತ್ತಿದೆ. ಕೆಟಿಪಿಪಿ ಕಾಯ್ದೆ ಮತ್ತು ನಿಯಮಗಳನ್ವಯ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮುಕ್ತ ಟೆಂಡರ್ ಕರೆಯಲಾಗಿದ್ದು, ಅರ್ಹತಾ ಮಾನದಂಡಗಳನ್ನು ಪೂರೈಸುವ ಯಾವುದೇ ಬಿಡ್‌ದಾರರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವನ್ನು ನೀಡಲಾಗಿರುತ್ತದೆ. ಈ ಕಾಮಗಾರಿಯ ಸಮರ್ಪಕ ನಿರ್ವಹಣೆ ಅನುಷ್ಠಾನ ಹಾಗೂ ಮೇಲುಸ್ತುವಾರಿಗೆ ಅನುಕೂಲವಾಗುವಂತೆ ರಾಜ್ಯದ ಕಂದಾಯ ವಿಭಾಗವಾರು ಟೆಂಡರ್ ಅನ್ನು ಕರೆಯಲಾಗಿರುತ್ತದೆ.

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಮಂತ್ರಾಲಯವು ದಿನಾಂಕ:01-12-2023ರಂದು ಹೊರಡಿಸಿರುವ ಸುತ್ತೋಲೆಯನ್ವಯ ಮಂಡಳಿಯ ವತಿಯಿಂದ ವಸತಿ ಶಾಲೆಯನ್ನು ನಿರ್ಮಿಸಲು ಕ್ರಮಕೈಗೊಳ್ಳಲಾಗುತ್ತಿದೆ. ಮುಂದುವರೆದು, ಮಂಡಳಿಯಿಂದ ಸ್ಥಾಪಿಸಲು ಉದ್ದೇಶಿಸಿರುವ ಶಾಲೆಗಳು ವಸತಿ ಶಾಲೆಗಳಾಗಿದ್ದು ಸರ್ಕಾರಿ ಶಾಲೆಗಳು ವಸತಿ

ಶಾಲೆಗಳಾಗಿರುವುದಿಲ್ಲ. ಆದುದರಿಂದ, ಈ ಯೋಜನೆಯ ಪ್ರಸ್ತಾವನೆಯ ಹಂತದಲ್ಲಿ ವಸತಿ ಶಾಲೆಗಳನ್ನು ನಿರ್ಮಿಸಿ ನಿರ್ವಹಿಸುತ್ತಿರುವ ಸಮಾಜ ಕಲ್ಯಾಣ ಇಲಾಖೆಯ ಅಧೀನದ ಸರ್ಕಾರದ ಸಂಸ್ಥೆಯಾದ KREIS ನಿಂದ ಅಗತ್ಯ ಮಾಹಿತಿಯನ್ನು ಪಡೆಯಲಾಗಿರುತ್ತದೆ.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ಮತ್ತು ಕರ್ನಾಟಕ ನಿಯಮಗಳು 2006 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಬಿತರ ಕಲ್ಯಾಣ ಮತ್ತು ಸಾಮಾಜಿಕ ಸುರಕ್ಷತೆಗಾಗಿ ಇರುವ ಶಾಸನವಾಗಿದ್ದು, ಈ ಕಾಯ್ದೆಯಡಿ ಸಂಗ್ರಹವಾದ ಸುಂಕ ಮೊತ್ತವನ್ನು ಸರ್ಕಾರದ ಯಾವುದೇ ಯೋಜನೆಗಳಿಗೆ ವಿನಿಯೋಗಿಸಲು ಅವಕಾಶವಿರುವುದಿಲ್ಲ.

ಈ ಯೋಜನೆಯ ಅನುಷ್ಠಾನದಲ್ಲಿ ಎಲ್ಲಾ ನೀತಿ ನಿಯಮಗಳನ್ನು ಪಾಲಿಸಿ ಮುಕ್ತ ಟೆಂಡರ್ ಕರೆದು ಯೋಜನೆಯನ್ನು ಅನುಷ್ಠಾನ ಮಾಡಲು ಕ್ರಮಕೈಗೊಳ್ಳಲಾಗುತ್ತಿದ್ದು, ಯಾವುದೇ ಅಕ್ರಮಕ್ಕೆ ಅವಕಾಶವಿರುವುದಿಲ್ಲ.

**ಕಾಇ 444 ಎಲ್ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**